ಕರ್ನಾಟಕ ಸರ್ಕಾರ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ

ಸಂಖ್ಯೆ:ಕೆಎಸ್‌ಐಸಿಪಿಎಸ್/ಕೋವಿಡ್-19/ /2020-21 ದಿನಾಂಕ:02.07.2020

ಜಿಲ್ಲಾಧಿಕಾರಿಗಳು
ಹಾಗೂ ಅಧ್ಯಕ್ಷರು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಬೆಂಗಳೂರು ನಗರ ಜಿಲ್ಲೆ.

ಮಾನ್ಯರೆ,

ವಿಷಯ: ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಅಡಿಯಲ್ಲಿ ರೆಸ್ಕ್ಯೂ ಮಾಡಲಾದ ಮತ್ತು ಇಲಾಖೆಯ ಪಾಲನೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ ವಿಷಯದಲ್ಲಿ ಹಾಗೂ ಕಾನೂನಿನ ಸಂಘರ್ಷಕ್ಕೆ ಒಳಪಟ್ಟ ಮಕ್ಕಳ ವಿಷಯದಲ್ಲಿ- ಹೊಸ ದಾಖಲಾತಿ ಮಕ್ಕಳ ಬಗ್ಗೆ.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ರವರ ಅರೆ ಸರ್ಕಾರಿ ಪತ್ರ ಸಂ.ಕೆಎಸ್‌ಐಸಿಪಿಎಸ್/ಕೋವಿಡ್-19/60/2020-21 ದಿನಾಂಕ:29.04.2020

ವಿಷಯಕ್ಕೆ ಸಂಬಂಧಿಸಿದಂತೆ, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಅಡಿಯಲ್ಲಿ ರೆಸ್ಕ್ಯೂ ಮಾಡಲಾದ ಮತ್ತು ಇಲಾಖೆಯ ಪಾಲನೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ ವಿಷಯದಲ್ಲಿ ಹಾಗೂ ಕಾನೂನಿನ ಸಂಘರ್ಷಕ್ಕೆ ಒಳಪಟ್ಟ ಮಕ್ಕಳ ವಿಷಯದಲ್ಲಿ- ಹೊಸ ದಾಖಲಾತಿ ಮಕ್ಕಳ ಕುರಿತು ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕವಾಗಿ ಕ್ವಾರಂಟೈನ್ ವ್ಯವಸ್ಥೆ ಮಾಡುವ ಕುರಿತು ಅಗತ್ಯ ಕ್ರಮಕೈಗೊಳ್ಳಲು ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿರುತ್ತದೆ. ಅದರಂತೆ ಎಲ್ಲಾ ಜಿಲ್ಲೆಗಳಲ್ಲಿಯೂ ಅಗತ್ಯ ಕ್ರಮ ಕೈಗೊಳ್ಳಲಾಗಿರುತ್ತದೆ.

ಆದರೆ ತಮ್ಮ ಜಿಲ್ಲೆಯಲ್ಲಿ ಇದುವರೆವಿಗೂ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಅಡಿಯಲ್ಲಿ ರೆಸ್ಕ್ಯೂ ಮಾಡಲಾದ ಮತ್ತು ಇಲಾಖೆಯ ಪಾಲನೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ ವಿಷಯದಲ್ಲಿ ಹಾಗೂ ಕಾನೂನಿನ ಸಂಘರ್ಷಕ್ಕೆ ಒಳಪಟ್ಟ ಮಕ್ಕಳ ವಿಷಯದಲ್ಲಿ- ಹೊಸ ದಾಖಲಾತಿ ಮಾಡುವ ಕುರಿತು ಯಾವುದೇ ಸೂಕ್ತ ಕ್ವಾರಂಟೈನ್ ವ್ಯವಸ್ಥೆಯನ್ನು ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕವಾಗಿ ಮಾಡಿಕೊಳ್ಳದಿರುವುದು ಗಮನಕ್ಕೆ ಬಂದಿರುತ್ತದೆ. ಬೆಂಗಳೂರಿನಲ್ಲಿ ಕೋವಿಡ್-19 ಮಹಾಮಾರಿಯು ವ್ಯಾಪಕವಾಗಿ ಹರಡುತ್ತಿರುವುದರಿಂದ ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕವಾಗಿ ಕ್ವಾರಂಟೈನ್ ವ್ಯವಸ್ಥೆ ಮಾಡಿರುವ ಬಗ್ಗೆ ಹಾಗೂ ಈ ವಿಷಯದಲ್ಲಿ ಮಕ್ಕಳ ಕಲ್ಯಾಣ ಸಮಿತಿಯಿಂದ ಅವಶ್ಯಕ ಆದೇಶಗಳನ್ನು ಹೊರಡಿಸಿಕೊಂಡು ಸಂಪೂರ್ಣ ಮಾಹಿತಿಯನ್ನು ಹಾಗೂ ಕ್ವಾರಂಟೈನ್‌ಗಾಗಿ ಆಯ್ಕೆಯಾದ ಸಂಸ್ಥೆಗಳ ವಿವರಗಳು ಮತ್ತು ಈ ಬಗ್ಗೆ ಮಕ್ಕಳ ಕಲ್ಯಾಣ ಸಮಿತಿ ಆದೇಶಗಳ ವಿವರಗಳೊಂದಿಗೆ 3 ದಿನಗಳೊಳಗೆ ಪ್ರಧಾನ ಕಛೇರಿಗೆ ವರದಿ ನೀಡಲು ಸೂಚಿಸಿದೆ.

ತಮ್ಮ ವಿಶ್ವಾಸಿ,
02.07.2020
ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

ಪ್ರತಿಯನ್ನು:-

1) ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ನಗರ ಜಿಲ್ಲೆ ಇವರಿಗೆ.
2) ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ನಗರ ಜಿಲ್ಲೆ ಇವರಿಗೆ.

F/Director ICPS/ICPS office Note